## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Gamesa Renewable Private Limited ಕಂಪನಿಗೆ ಹಾವೇರಿ ಜಿಲ್ಲೆಯ ಹಾನಗಲ್, ಹಾವೇರಿ ಮತ್ತು ಬ್ಯಾಡಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 20 ಮೆ.ವ್ಯಾ., ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹೆಸರನ್ನು M/s Siemens Gamesa Renewable Power Private Limited ಎಂದು ಬದಲಾಯಿಸಿ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಪತ್ರ ಸಂಖ್ಯೆ : ಇಎನ್ 07 ಎನ್‌ಸಿಇ 2016, ದಿ :06/01/2016.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಏಕ ಕಡತ ಸಂಖ್ಯೆ: 1288–G

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಪತ್ರದಲ್ಲಿ M/s Gamesa Renewable Private Limited ಕಂಪನಿಗೆ ಹಾವೇರಿ ಜಿಲ್ಲೆಯ ಹಾನಗಲ್, ಹಾವೇರಿ ಮತ್ತು ಬ್ಯಾಡಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು 02 ವರ್ಷಗಳ ಅವಧಿಯಲ್ಲಿ 20 ಮೆ.ವ್ಯಾ., ಸಾಮರ್ಥ್ಯಕ್ಕೆ ವಿವರವಾದ ಯೋಜನಾ ವರದಿಯನ್ನು ಕ್ರೆಡಲ್‌ಗೆ ಸಲ್ಲಿಸುವ ಷರತ್ತಿಗೊಳಪಟ್ಟು ತತ್ವತಃ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಏಕ ಕಡತ ಪದ್ಧತಿಯಲ್ಲಿ M/s Gamesa Renewable Private Limited ಕಂಪನಿಗೆ ಹಾವೇರಿ ಜಿಲ್ಲೆಯ ಹಾನಗಲ್, ಹಾವೇರಿ ಮತ್ತು ಬ್ಯಾಡಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ತತ್ವತಃ ಅನುಮೋದನೆಗೊಂಡಿರುವ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹೆಸರನ್ನು M/s Siemens Gamesa Renewable Power Private Limited ಎಂದು Government of India Ministry of Corporate Affairs, Registrar of Companies, Chennai, ಇಲ್ಲಿ ಹೆಸರು ಬದಲಾಯಿಸಿರುವುದಕ್ಕೆ ಸಲ್ಲಿಸಿದ ದಾಖಲಾತಿಗಳನ್ನು ಪರಿಶೀಲಿಸಿದ್ದು, ಎರಡೂ ಕಂಪನಿಗಳ CIN No. U74991TN2006PTC079179 ಒಂದೇ ಆಗಿರುತ್ತದೆ. ಹೆಸರು ಬದಲಾವಣೆ ಶುಲ್ಕವಾದ ರೂ.2,36,600/- ಗಳನ್ನು ಕ್ರೆಡಲ್‌ಗೆ ಪಾವತಿಸಿದ್ದು, M/s Gamesa Renewable Private Limited ಕಂಪನಿಯು ಹೆಸರನ್ನು M/s Siemens Gamesa Renewable Power Private Limited ಎಂದು ಬದಲಾಯಿಸಲು ಕೋರಿರುತ್ತಾರೆ.

ತದನಂತರ, M/s Siemens Gamesa Renewable Power Private Limited ಕಂಪನಿಗೆ ತತ್ವತಃ ಅನುಮೋದನೆಗೊಂಡಿರುವ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಕೋರಿ 20 ಮೆ.ವ್ಯಾ ಸಾಮರ್ಥ್ಯಕ್ಕೆ ಡಿ.ಪಿ.ಆರ್ ಶುಲ್ಕ & ಜಿ.ಎಸ್.ಟಿ ಶುಲ್ಕವನ್ನು ಪಾವತಿಸಿರುವುದಾಗಿ ತಿಳಿಸಿರುತ್ತಾರೆ. M/s Siemens Gamesa Renewable Power Private Limited ಕಂಪನಿಯು ನೆಟ್ ವರ್ತ್ ದಿನಾಂಕ: 31.03.2017 ಕ್ಕೆ ರೂ.2717.96 ಕೋಟಿಗಳಿರುವುದಾಗಿ ಚಾರ್ಟೆಡ್ ಅಕೌಂಟೆಂಟ್ ರವರು ದೃಢೀಕರಣ ನೀಡಿರುವುದಾಗಿ ತಿಳಿಸುತ್ತಾ, ಈಗಾಗಲೇ ತತ್ವತಃ ಅನುಮೋದನೆಗೊಂಡಿರುವ 20 ಮೆ.ವ್ಯಾ ಸಾಮರ್ಥ್ಯದ ಸ್ಥಳದಲ್ಲಿ ಸ್ವಂತ ಉಪಯೋಗ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಉದ್ದೇಶಕ್ಕಾಗಿ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಕೋರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ [illegible] ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ರವರು ಪ್ರಸ್ತಾವನೆ ಸಲ್ಲಿಸುತ್ತಾರೆ.

....2)

Copy Attested under RTI

Asst. Public Information Officer
KREDL

## Schedule

### Geographical area description for 20 MW capacity Wind Power Project

| Sl. No | Toposheet No | Proposed capacity in MW | Near by villages of the proposed area and district | Geographical area description of the Project |
|---|---|---|---|---|
| 1 | 48 N/6 | 60 MW (10 Nos x 2000KW) | Hedigond, Kalgond, Kaginelli, Tinkapur, Kurabgond, Sankupur, Homardi, Hire Lingadahalli, Chikka Lingadahalli, Banihalli, Benakanhalli, Kabbur, Hosur, Kabbur Tanda, Guddada Mattihalli, Multhalli, Somasagur, Uppunasi, Hire Basur, Kasamul, Kummur, Chikka Basur, Masangi, Ingalgondi and Nagalapur Villages of Hanagal, Haveri and Byadagi Taluks of Haveri District | The proposed area is a mixture of plains and ridges and is non-contiguous. The area consists of several tanks, open scrubs, power & telephone lines, and eucalyptus plantations. The area is surrounded by points A, B, C, D, E, F, G, H and are held in the following Geographical co-ordinates as:<br>Point A: Lat:14°38'30.96''N, Long :75°18'22.17''E<br>Point B: Lat:14°41'29''N, Long :75°18'18.80''E<br>Point C: Lat:14°43'42.50''N, Long :75°17'41.74''E<br>Point D: Lat:14°45'0''N, Long :75°21'47.82''E<br>Point E: Lat:14°45'0''N, Long :75°25'35.38''E<br>Point F: Lat:14°40'8.24''N, Long :75°25'38.75''E<br>Point G: Lat:14°40'6.59''N, Long :75°24'44.73''E<br>Point H: Lat:14°38'34.26''N, Long :75°24'44.73''E<br>Peaks : 712, 658, 600, 638, 620, 603, 596, 577, 584, 640, 587, 592, 576, 581, 588, 579, 602, 621, 646 and 613m AMSL. |
| | Total | 20MW | | |

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 104 ಎನ್‌ಸಿಇ 2018, ಬೆಂಗಳೂರು, ದಿನಾಂಕ:01.03.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರದ ಪತ್ರ ಸಂಖ್ಯೆ : ಇಎನ್ 07 ಎನ್‌ಸಿಇ 2016, ದಿ :06/01/2016ರನ್ವಯ M/s Gamesa Renewable Private Limited ಕಂಪನಿಗೆ ಹಾವೇರಿ ಜಿಲ್ಲೆಯ ಹಾನಗಲ್, ಹಾವೇರಿ ಮತ್ತು ಬ್ಯಾಡಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ತತ್ವತಃ ಅನುಮೋದನೆ ನೀಡಲಾದ 20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹೆಸರನ್ನು M/s Siemens Gamesa Renewable Power Private Limited ಎಂದು ಬದಲಾಯಿಸಲು ಸಮ್ಮತಿಸಿದೆ.

ಮುಂದುವರೆದು, M/s Siemens Gamesa Renewable Power Private Limited ಕಂಪನಿಗೆ ಹಾವೇರಿ ಜಿಲ್ಲೆಯ ಹಾನಗಲ್, ಹಾವೇರಿ ಮತ್ತು ಬ್ಯಾಡಗಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಗ್ರಾಮಗಳಲ್ಲಿ ಸ್ವಂತ ಬಳಕೆ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಉದ್ದೇಶಕ್ಕಾಗಿ 20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಷೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

Copy Attested under RTI

...3)

Asst. Public Information Officer
KREDL

## Schedule

### Geographical area description for 20 MW capacity Wind Power Project

| Sl. No | Toposheet No | Proposed capacity in MW | Near by villages of the proposed area and district | Geographical area description of the Project |
|---|---|---|---|---|
| 1 | 48 N/6 | 60 MW (10 Nos x 2000KW) | Hedigond, Kalgond, Kaginelli, Tinkapur, Kurabgond, Sankupur, Homardi, Hire Lingadahalli, Chikka Lingadahalli, Banihalli, Benakanhalli, Kabbur, Hosur, Kabbur Tanda, Guddada Mattihalli, Multhalli, Somasagur, Uppunasi, Hire Basur, Kasamul, Kummur, Chikka Basur, Masangi, Ingalgondi and Nagalapur Villages of Hanagal, Haveri and Byadagi Taluks of Haveri District | The proposed area is a mixture of plains and ridges and is non-contiguous. The area consists of several tanks, open scrubs, power & telephone lines, and eucalyptus plantations. The area is surrounded by points A, B, C, D, E, F, G, H and are held in the following Geographical co-ordinates as:<br><br>Point A: Lat:14°38'30.96''N, Long :75°18'22.17''E<br>Point B: Lat:14°41'29''N, Long :75°18'18.80''E<br>Point C: Lat:14°43'42.50''N, Long :75°17'41.74''E<br>Point D: Lat:14°45'0''N, Long :75°21'47.82''E<br>Point E: Lat:14°45'0''N, Long :75°25'35.38''E<br>Point F: Lat:14°40'8.24''N, Long :75°25'38.75''E<br>Point G: Lat:14°40'6.59''N, Long :75°24'44.73''E<br>Point H: Lat:14°38'34.26''N, Long :75°24'44.73''E<br><br>Peaks : 712, 658, 600, 638, 620, 603, 596, 577, 584, 640, 587, 592, 576, 581, 588, 579, 602, 621, 646 and 613m AMSL. |
| | Total | 20MW | | |

ಷರತ್ತು ಮತ್ತು ನಿಬಂಧನೆಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮ್‌ನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

Copy Attested under RTI

...4)

Asst. Public Information Officer
KREDL

7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.
ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2. ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು - 560001
3. ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು - 560001.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.

Copy Attested under RTI

...5)

Asst. Public Information Officer
KREDL

9. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ.
10. ಜಿಲ್ಲಾಧಿಕಾರಿ, ಹಾವೇರಿ ಜಿಲ್ಲೆ, ಹಾವೇರಿ.
11. ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾವೇರಿ ವಿಭಾಗ, ಹಾವೇರಿ.
12. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
13. M/s Gamesa Renewable Private Limited, No.24, Saraogi Mansion, 2nd Cross, Nehru Nagar, Sheshadripuram, Bangalore – 560 020.
14. M/s Siemens Gamesa Renewable Power Private Limited, No.24, Saraogi Mansion, 2nd Cross, Nehru Nagar, Sheshadripuram, Bangalore – 560 020.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
16. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
17. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

Copy Attested under RTI

Asst. Public Information Officer
KREDL